ಪ್ರಾಸಾ-1 ರವರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋಧಿಸಿದ ದಿನಾಂಕಃ 13-10-2025

ಪಾಟೀ ಸವಾಲು 1, 2 ಮತ್ತು 5 ನೇ ಆರೋಪಿತರ ಪರವಾಗಿ ಶ್ರೀ. ಯು.ಜಡ್. ಹೆಚ್. ವಕೀಲರಿಂದ

1. ಹೆಣ ತೆಗೆಯುವ ಕಾಲಕ್ಕೆ ನಾನು ಹಾಜರು ಇದ್ದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕಲ್ಲನು್ನ ನಾನು ನೋಡಿರುವುದಿಲ್ಲ ಎಂದರೆ ಸರಿ. ಹೆಣ ತೆಗೆಯುವ ಕಾಲಕ್ಕೆ ತೆಗೆದಂತಹ ಭಾವಚಿತ್ರಕ್ಕೆ ನೀನು ಇರುವುದಿಲ್ಲ ಎನ್ನುವುದಕ್ಕೆ ಸಾಕ್ಷಿದಾರರು ನನಗೆ ಏನು ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಶವ ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಿರುತ್ತಾರೆ ನೀನು ಸುಳ್ಳು ಹೇಳುತ್ತಿದ್ದೀರಿ ಎನ್ನುವುದಕ್ಕೆ ಸಾಕ್ಷಿದಾರರು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಶವಪಂಚನಾಮೆ ಕಾಲಕ್ಕೆ ತೆಗೆದಂತಹ ಭಾವಚಿತ್ರಗಳು ಸುಳ್ಳು ಇರುತ್ತವೆ ಎನ್ನುವುದಕ್ಕೆ ಸಾಕ್ಷಿದಾರರು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಮೃತ ವ್ಯಕ್ತಿಯ ಮೈಮೇಲಿ ಇದ್ದಂತಹ ಬಟ್ಟೆಗಳು ನನ್ನ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ ಎನ್ನುವುದಕ್ಕೆ ಸಾಕ್ಷಿದಾರರು ಆಸ್ಪತ್ರೆಯಲ್ಲಿ ಮಾತ್ರ ಪಂಚನಾಮೆ ಮಾಡಿರುತ್ತಾರೆ ಅಷ್ಟು ಮಾತ್ರ ನನಗೆ ಗೊತ್ತು ಎಂದು ನುಡಿಯುತ್ತಾರೆ. ಪೊಲೀಸರ ಮಾತು ಕೇಳಿ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು 6 ನೇ ಆರೋಪಿತರ ಪರವಾಗಿ ಶ್ರೀ. ಎಸ್.ಎಸ್.ಪಿ. ವಕೀಲರಿಂದ

1. ನಿಮ್ಮ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಎನ್ನುವುದಕ್ಕೆ ಸಾಕ್ಷಿದಾರರು ನನಗೆ ಗೊತ್ತಿರುವುದಿಲ್ಲವೆಂದು ನುಡಿಯುತ್ತಾರೆ. ದಿಃ 13.12.2015 ರಂದು ಬೆಳಿಗ್ಗೆ 10.00 ಗಂಟೆಗೆ ಮೃತ ಲಕ್ಷ್ಮಣ ಚಾಸಾ-18 ರವರ ಜಮೀನಿಗೆ ಗಳೆ ಹೊಡೆಯಲು ಹೋಗಿದ್ದೇನೆ ಎಂದು ನಾನು ಸುಳ್ಳು ಹೇಳುತ್ತಿದ್ದೀರಿ ಎನ್ನುವುದಕ್ಕೆ ಸಾಕ್ಷಿದಾರರು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಉಳಿದಂತಹ ಮೇಲಿನ ಪಾಟೀ ಸವಾಲನ್ನು ಅಳವಡಿಸಿಕೊಳ್ಳುವುದಾಗಿ ನುಡಿದಿರುತ್ತಾರೆ.

-ಮರುವಿಚಾರಣೆ ಇಲ್ಲ.

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ. ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಯಾದಗಿರಿ.

**ಪ್ರಾಸಾ-2 ರವರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋಧಿಸಿದ ದಿನಾಂಕಃ 13-10-2025**

**ಪಾಟೀ ಸವಾಲು 1, 2 ಮತ್ತು 5  ನೇ ಆರೋಪಿತರ  ಪರವಾಗಿ   ಶ್ರೀ. ಯು.ಜಡ್. ಹೆಚ್. ವಕೀಲರಿಂದ**

1. ಸುಮಾರು 10 ವರ್ಷಗಳ ಹಿಂದೆ ನನ್ನನ್ನು ಕರೆಯಿಸಿ ಹೆಣ ತೆಗೆಸಿದ ಪಂಚನಾಮೆ ಮಾಡಿರುತ್ತಾರೆ ಎಂದು ನಾನು ಪಂಚನಾಮೆ ಮಾಡಿರುತ್ತಾರೆ ಎಂದು ನೀವು ಸುಳ್ಳು ಹೇಳುತ್ತಿದ್ದೀರಿ ಎನ್ನುವುದಕ್ಕೆ ಸಾಕ್ಷಿದಾರರು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಹೆಣ ತೆಗೆದ ಸ್ಥಳದಲ್ಲಿ ಒಂದು ಕಲ್ಲು ಜಪ್ತಿ ಮಾಡಿರುತ್ತಾರೆ ನೀವು ಸುಳ್ಳು ಹೇಳುತ್ತಿದ್ದೀರಿ ಎನ್ನುವುದಕ್ಕೆ ಸಾಕ್ಷಿದಾರರು ನಾನು ನೋಡಿಲ್ಲ ಎಂದು ನುಡಿಯುತ್ತಾರೆ.  ಪೊಲೀಸರ ಮಾತು ಕೇಳಿ ನೀವು  ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎನ್ನುವುದಕ್ಕೆ ಸಾಕ್ಷಿದಾರರು ಗೊತ್ತಿಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು 6  ನೇ ಆರೋಪಿತರ  ಪರವಾಗಿ   ಶ್ರೀ. ಎಸ್.ಎಸ್.ಪಿ. ವಕೀಲರಿಂದ**

1. ಪಂಚನಾಮೆಯಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ ಎಂದರೆ ಸರಿ. ದಿಃ 20.12.2016 ರಂದು ನನ್ನನ್ನು ಮತ್ತು ಚಾಸಾ-2 ರವರನ್ನು ಬೆಳಿಗ್ಗೆ 9.30 – 10.00 ಗಂಟೆಯವರೆಗೆ ಯಾದಗಿರಿ ಗ್ರಾಮೀಣ ಠಾಣೆಗೆ ಕರಯಿಸಿದ್ದರು ಎನ್ನುವುದಕ್ಕೆ ಸಾಕ್ಷಿದಾರರು ನಾನು ಪೊಲೀಸ ಠಾಣೆಗೆ ಹೋಗಿರುವುದಿಲ್ಲ ಎಂದು ನುಡಿಯುತ್ತಾರೆ.

-ಮರುವಿಚಾರಣೆ ಇಲ್ಲ.

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)
ಓ.ಹೇ.ಕೆ.ಸ. ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಯಾದಗಿರಿ.